158ನೇ ಖುಉ SL.NO. 19 10-03-26

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ವ್ಹಿ. ಸಂಕನೂರ ಇವರ ದಿನಾಂಕ: 10.03.2026ರ ಶೂನ್ಯ ವೇಳೆ ಪ್ರಸ್ತಾವನೆಗೆ ಮಾನ್ಯ ಕೃಷಿ ಸಚಿವರ ಉತ್ತರ.**

**ವಿಷಯ:** ರಾಜ್ಯದಲ್ಲಿ ಐದು ಕೃಷಿ ವಿಶ್ವವಿದ್ಯಾಲಯಗಳಿದ್ದು ಇವುಗಳಲ್ಲಿ ಸುಮಾರು ಅರ್ಧದಷ್ಟು ಬೋಧಕ ಹುದ್ದೆಗಳು ಖಾಲಿ ಇರುವುದರಿಂದ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಹಾಗು ಕೃಷಿ ಕ್ಷೇತ್ರದಲ್ಲಿ ಸಂಶೋಧನೆ ಮಾಡಲು ಹಿನ್ನಡೆಯಾಗಿದೆ ಎಂದು ಮತ್ತು ಕೃಷಿ ವಿಶ್ವವಿದ್ಯಾಲಯಗಳು ಕೇವಲ ಪದವಿ ನೀಡುವ ಕೇಂದ್ರಗಳಾಗಿವೆ ಎಂದು ಪತ್ರಿಕೆಯಲ್ಲಿ ವರದಿಯಾಗಿದೆ.

ಕಳೆದ ಹತ್ತು ವರ್ಷಗಳಲ್ಲಿ ನಿವೃತ್ತಿ ನಿಧನ ಮತ್ತು ಇತರ ಕಾರಣಗಳಿಂದ ಸಾಕಷ್ಟು ಹುದ್ದೆಗಳು ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಾಗಿದ್ದು ಅರೆಕಾಲಿಕ ಪ್ರಾಧ್ಯಾಪಕರು ಇದ್ದರೂ ಕೂಡ ಬೋಧಕರ ಮೇಲೆ ಕೆಲಸದ ಒತ್ತಡ ಹೆಚ್ಚಾಗಿರುವುದು ಮತ್ತು ಸಂಶೋಧನೆಗೆ ಮಾರ್ಗದರ್ಶನ ಮಾಡಲು ಪ್ರಾಧ್ಯಾಪಕರ ಕೊರತೆ ಎದುರಾಗಿದೆ. ಕೃಷಿ ವಿಶ್ವವಿದ್ಯಾಲಯ ಧಾರವಾಡದಲ್ಲಿ 595 ಮಂಜೂರಾದ ಹುದ್ದೆಗಳಲ್ಲಿ, 283 ಭರ್ತಿಯಾಗಿದ್ದು 312 ಹುದ್ದೆಗಳು ಖಾಲಿ ಇವೆ, ರಾಯಚೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಮಂಜೂರಾದ 517 ಹುದ್ದೆಗಳಲ್ಲಿ 258 ಹುದ್ದೆಗಳು ಭರ್ತಿಯಾಗಿದ್ದು 261 ಹುದ್ದೆಗಳು ಖಾಲಿ ಇರುವವು, ಅದರಂತೆ ಕೃಷಿ ವಿಶ್ವವಿದ್ಯಾಲಯ ಮಂಡ್ಯದಲ್ಲಿ 250 ಮಂಜೂರಾದ ಹುದ್ದೆಗಳಲ್ಲಿ 136 ಭರ್ತಿಯಾಗಿದ್ದು 114 ಖಾಲಿ ಇರುವವು. ಒಟ್ಟಾರೆಯಾಗಿ 5 ಕೃಷಿ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾದ 2232 ಹುದ್ದೆಗಳಲ್ಲಿ 1205 ಹುದ್ದೆಗಳು ಭರ್ತಿಯಾಗಿದ್ದು 949 ಹುದ್ದೆಗಳು ಖಾಲಿ ಇರುವವು. ಇಷ್ಟೊಂದು ದೊಡ್ಡ ಸಂಖ್ಯೆಯಲ್ಲಿ ಬೋಧಕರ ಹುದ್ದೆಗಳು ಖಾಲಿ ಇದ್ದಾಗ ಕೂಡ 2026-27 ನೇ ಸಾಲಿನ ಆಯವ್ಯಯದಲ್ಲಿ ಒಂದೂ ಹುದ್ದೆಯನ್ನು ತುಂಬಿಕೊಳ್ಳುವ ಬಗ್ಗೆ ಪ್ರಸ್ತಾವವಿಲ್ಲದಿರುವುದು ಒಂದು ರೀತಿಯಲ್ಲಿ ಕೃಷಿ ಕ್ಷೇತ್ರವನು ನಿರ್ಲಕ್ಷಿಸಿದಂತಾಗಿದೆ.

ಆದ್ದರಿಂದ ಸದ್ಯದ ಬಜೆಟ್‌ನಲ್ಲಿ ಕನಿಷ್ಠ 500 ಪ್ರಾಧ್ಯಾಪಕರ ಹುದ್ದೆಗಳನ್ನು ತುಂಬಿಕೊಳ್ಳಲು ಬೇಕಾಗುವ ಅನುದಾನವನ್ನು ಕಾಯ್ದಿರಿಸಲು ಸೂಕ್ತ ಕ್ರಮ ಜರುಗಿಸಲು ಮಾನ್ಯ ಕೃಷಿ ಸಚಿವರನ್ನು ಒತ್ತಾಯಿಸುವೆನು.

*****

**ಉತ್ತರ:**

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೆನೆನಿ 2024, ದಿನಾಂಕ: 25.11.2024ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸಹಿಮ 2025, ದಿನಾಂಕ: 03.09.2025ರಲ್ಲಿ ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿಗಳಿಗೆ ಒಳಮೀಸಲಾತಿಯನ್ನು ಕಲ್ಪಿಸಿರುವ ಪರಿಣಾಮವಾಗಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಪರಿಷ್ಕೃತ ಮೀಸಲಾತಿ ರೋಸ್ಟರ್ ಬಿಂದುಗಳನ್ನು ಅನುಸರಿಸಿ ಮುಂದಿನ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳುವಂತೆ ಆದೇಶಿಸಲಾಗಿದೆ.

ದಿನಾಂಕ: 03.09.2025ರ ಆದೇಶದನ್ವಯ ಖಾಲಿ ಇರುವ ಬೋಧಕ ಮತ್ತು ಭೋಧಕೇತರ ಹುದ್ದೆಗಳಿಗೆ ನೇಮಕಾತಿ ಮಾಡಿ ಅಧಿಸೂಚನೆ ಹೊರಡಿಸುವ ಸಂಬಂಧ ಎಲ್ಲ ಕೃಷಿ ವಿಶ್ವವಿದ್ಯಾಲಯಗಳಿಂದ ಪ್ರಸ್ತಾವನೆಗಳು ಸ್ವೀಕೃತವಾಗಿದ್ದು, ಈ ಸಂಬಂಧ ಆರ್ಥಿಕ ಇಲಾಖೆಯ ಅನುಮೋದನೆಗಾಗಿ ಪ್ರಸ್ತಾವನೆಗಳನ್ನು / ಕಡತವನ್ನು ಸಲ್ಲಿಸಲಾಗಿದೆ. ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯಿಂದ ಅನುಮೋದನೆ ದೊರೆತ ನಂತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕೃಷಿ ವಿಶ್ವವಿದ್ಯಾಲಯಗಳಿಗೆ ಅನುಮತಿ ನೀಡಲು ಕ್ರಮವಹಿಸಲಾಗುವುದು.

ಇ-ಸಂಖ್ಯೆ: AGRI/34/AUM/2026

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು.